ಬಾಗಲಕೋಟೆ-ವಿಜಯಪುರ ಜಿಲ್ಲೆಯ ಪ್ರವಾಸೋದ್ಯಮಗಳ ಕುರಿತು

ಶ್ರೀ ಎಸ್.ಆರ್. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

38 (118) ಮಾನ್ಯ ಪ್ರವಾಸೋದ್ಯಮ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬಾಗಲಕೋಟೆ-ವಿಜಯಪುರ ಜಿಲ್ಲೆಯಲ್ಲಿನ ಐತಿಹಾಸಿಕ ಸ್ಥಳಗಳಾದಂತಹ ಬಾದಾಮಿ, ಪಟ್ಟದಕಲ್ಲು, ಐಹೊಳೆ, ಗೋಲ್‌ಗುಂಬಜ್, ಇಬ್ರಾಹಿಂ ರೋಜಾ, ಇತರೆ ಪ್ರವಾಸಿ ತಾಣಗಳ ಅಭಿವೃದ್ಧಿಗಾಗಿ ಸರ್ಕಾರ ಕೈಗೊಂಡ ಕ್ರಮಗಳೇನು;

(ಆ) ಸದರಿ ಸ್ಥಳಗಳ ಅಭಿವೃದ್ಧಿಗಾಗಿ ಕಾಯ್ದಿರಿಸಿದ ಹಣ ಹಾಗೂ ಬಿಡುಗಡೆಗೊಳಿಸಿದ ಹಣ ಎಷ್ಟು;

(ಇ) ಈ ಐತಿಹಾಸಿಕ ಸ್ಥಳಗಳ ಅಭಿವೃದ್ಧಿಯನ್ನು ಸಮರೋಪಾದಿಯಲ್ಲಿ ಕೈಗೊಳ್ಳಲು ಸರ್ಕಾರಕ್ಕೆ ಇರುವ ತೊಂದರೆಗಳೇನು?